## ಸುದ್ದಿ ಸಿಂಚನ

### ಬೀದಿ ನಾಯಿಗಳ ದಾಳಿ; ಬಾಲಕಗೆ ಗಂಭೀರ ಗಾಯ

ಕಿಕ್ಕೇರಿ: ಬೀಡಾಡಿ ನಾಯಿ ಬಾಲಕನ ಮೇಲೆ ಮಾರಣಾಂತಿಕ ದಾಳಿ ಮಾಡಿ ಗಾಯಗೊಳಿಸಿರುವ ಘಟನೆಯು ಸಾಸಲು ಗ್ರಾಮದ ಜನರಲ್ಲಿ ಆತಂಕ ಉಂಟು ಮಾಡಿದೆ. ಗ್ರಾಮದ ರೈತ ಗುರುಮೂರ್ತಿ ಅವರ ಪುತ್ರ ಜಿ. ಚರಣ್ ಕುಮಾರ್ (11) ನಾಯಿಗಳ ದಾಳಿಯಿಂದ ಗಾಯಗೊಂಡಿರುವ ಬಾಲಕ. ಭಾನುವಾರ ಸಂಜೆ ಸುಮಾರು 6 ಗಂಟೆ ವೇಳೆಯಲ್ಲಿ ಡೇರಿಗೆ ಹಾಲು ತರಲು ಹೋಗುತ್ತಿದ್ದಾಗ ಮನೆ ತುಸು ದೂರದಲ್ಲಿರುವ ತೋಟದಿಂದ ನಾಯಿಗಳ ಹಿಂಡು ಬಾಲಕನ ಮೇಲೆ ಏಕಾಏಕಿ ದಾಳಿ ನಡೆಸಿವೆ. ಬೆದರಿದ ಬಾಲಕ ನಾಯಿಯಿಂದ ತಪ್ಪಿಸಿಕೊಳ್ಳಲು ಮುಂದಾಗಿ ನೆಲಕ್ಕೆ ಬಿದ್ದಿದ್ದಾನೆ. ಈ ವೇಳೆ ಒಂದು ನಾಯಿ ಬಾಲಕನನ್ನು ಹೊರಳಾಡಿಸಿ ಮುಖದ ಮೇಲೆ ದಾಳಿ ಮಾಡಿದೆ. ಕೂಗಿಕೊಂಡರೂ ಬಿಡದೆ ಹಣೆಯನ್ನು ಆಳವಾಗಿ ಸೀಳಿದೆ. ಕೂಡಲೇ ಬಾಲಕ ಚೀರಾಡಿ ಪ್ರಜ್ಞಾಹೀನನಾಗಿದ್ದಾನೆ. ನಾಯಿಗಳ ಬೊಗಳುವಿಕೆ, ಬಾಲಕನ ಚೀರಾಟ ಕೇಳಿ ಗ್ರಾಮಸ್ಥರು ಹಾಗೂ ಬಾಲಕನ ತಂದೆ ಗುರುಮೂರ್ತಿ ಕಂಡು ಘಟನಾ ಸ್ಥಳಕ್ಕೆ ಓಡಿ ಬಂದಿದ್ದಾರೆ. ಅಷ್ಟರಲ್ಲಿ ನಾಯಿಗಳ ಹಿಂಡು ಬೊಗಳುತ್ತ ಓಡಿ ಹೋಗಿವೆ. ಕೂಡಲೇ ಆರೆ ಪ್ರಜ್ಞೆಯಲ್ಲಿ ರಕ್ತಸಿಕ್ತವಾಗಿದ್ದ ಬಾಲಕನನ್ನು ಶ್ರವಣಬೆಳಗೊಳ ಸರ್ಕಾರಿ ಆಸ್ಪತ್ರೆಯಲ್ಲಿ ತುರ್ತು ಚಿಕಿತ್ಸೆಗೆ ಕರೆದುಕೊಂಡು ಹೋಗಿದ್ದಾರೆ. ಹೆಚ್ಚಿನ ಚಿಕಿತ್ಸೆಗೆ ಹಾಸನದ ಸರ್ಕಾರಿ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ನಿರಂತರವಾಗಿ ನಾಯಿಗಳು ಮಕ್ಕಳು, ದೊಡ್ಡವರ ಮೇಲೆ ದಾಳಿ ಮಾಡುತ್ತಿದ್ದರೂ ನಾಯಿಗಳ ನಿಯಂತ್ರಣಕ್ಕೆ ಗ್ರಾಪಂ ಹಾಗೂ ಮೇಲಾಧಿಕಾರಿಗಳು ಕ್ರಮ ಕೈಗೊಳ್ಳದಿರುವ ಬಗ್ಗೆ ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

### ಸಂಭ್ರಮದಿಂದ ನಡೆದ ಗ್ರಾಮದೇವತೆ ರಂಗದ ಹಬ್ಬ

ಕಿಕ್ಕೇರಿ: ಮಾದಾಪುರದಲ್ಲಿ ಗ್ರಾಮದೇವತೆ ಸಿಂಗಮ್ಮ ದೇವಿ ರಂಗದ ಹಬ್ಬ ಸಡಗರ, ಸಂಭ್ರಮದಿಂದ ಜರುಗಿತು. ವಾರಗಟ್ಟಲೆ ಯುವಕರು, ಮಕ್ಕಳನ್ನು ಗ್ರಾಮದ ಹಿರಿಯರು ರಂಗ ಕುಣಿತಕ್ಕೆ ತಯಾರು ಮಾಡಿದ್ದರು. ರಂಗ ಕುಣಿತದಾರರು ಕಾಲಿಗೆ ಗೆಜ್ಜೆ, ಹಣೆಗೆ ತಿಲಕವಿಟ್ಟು ಕೈಯಲ್ಲಿ ಟವಲ್ ಹಿಡಿದು ತಮಟೆ ನಾದಕ್ಕೆ ಲಯವಾದ ಹೆಜ್ಜೆ ಹಾಕಿದರು. ರಂಗನಕುಣಿತದಲ್ಲಿ ಹಿರಿಯರೊಂದಿಗೆ ನೂರಾರು ಯುವಕರು ಭಾಗವಹಿಸಿ ಮಕ್ಕಳನ್ನು ಕುಣಿತಕ್ಕೆ ಹುರಿದುಂಬಿಸಿದರು. ವಿವಿಧ ಗ್ರಾಮಗಳಿಂದ ಆಗಮಿಸಿದ್ದ ಸಾರ್ವಜನಿಕರು ರಂಗಕುಣಿತವನ್ನು ವೀಕ್ಷಿಸಿದರು. ರಂಗ ಸ್ಥಳದಲ್ಲಿ ರಂಗಕುರ್ಜುವಿನ ಸುತ್ತ ಪ್ರದಕ್ಷಿಣೆ ಆಕಾರದಲ್ಲಿ ಹೆಜ್ಜೆ ಹಾಕಿದರು. ಇಡೀ ರಾತ್ರಿ ರಂಗ ಕುಣಿತ ಜೋರಾಗಿ ನಡೆಯಿತು. ಗ್ರಾಮದಲ್ಲಿ ತಳಿರು ತೋರಣ, ರಂಗೋಲಿಗಳಿಂದ ಶೃಂಗರಿಸಲಾಗಿತ್ತು. ವಿದ್ಯುತ್ ದೀಪಗಳ ಅಲಂಕಾರದಿಂದ ಗ್ರಾಮವೆಲ್ಲ ಜಗಮಗಿಸುತ್ತಿತ್ತು. ಅಲ್ಲಲ್ಲಿ ಕೇಸರಿ ಬಾವುಟಗಳ ಹಾರಾಡಿದವು. ಗ್ರಾಮದ ಹೊರವಲಯದ ಸಿಂಗಮ್ಮ ದೇವಿಗೆ ಅಭಿಷೇಕ ನೆರವೇರಿಸಿ ವಿವಿಧ ಪರಿಮಳ ಪುಷ್ಪಗಳಿಂದ ಅಲಂಕರಿಸಲಾಯಿತು. ವಿವಿಧ ಆಭರಣ, ವಸ್ತ್ರಗಳಿಂದ ಶೃಂಗರಿಸಲಾಗಿತ್ತು. ಪ್ರಮುಖ ಬೀದಿಯಲ್ಲಿ ತಮಟೆ ವಾದ್ಯದೊಂದಿಗೆ ಪಂಜಿನ ಸೇವೆ ಮಾಡುತ್ತ ಮೆರವಣಿಗೆ ಮೂಲಕ ರಂಗಸ್ಥಳಕ್ಕೆ ತರಲಾಯಿತು. ದೇವಿಯನ್ನು ರಂಗಮಂಟಪದ ಸುತ್ತ ಪ್ರದಕ್ಷಿಣೆ ಹಾಕಿಸಲಾಯಿತು. ದೇವಿಗೆ ಜೈಕಾರ ಹಾಕುತ್ತ ರಂಗಮಂಟಪದಲ್ಲಿ ಪ್ರತಿಷ್ಠಾಪಿಸಲಾಯಿತು. ಗ್ರಾಮದ ಪ್ರತಿ ಮನೆಯವರು ಶ್ರದ್ಧಾ- ಭಕ್ತಿಯಿಂದ ದೇವಿಗೆ ಹಣ್ಣು ಕಾಯಿ ಅರ್ಪಿಸಿದರು. ಆರತಿ ಬೆಳಗಿ ಇಷ್ಟಾರ್ಥಕ್ಕೆ ಪ್ರಾರ್ಥಿಸಿದರು.

**ಕೃಷ್ಣರಾಜಸಾಗರ ಜಲಾಶಯ ನೀರಿನ ಮಟ್ಟ**

| | |
|---|---|
| ಗರಿಷ್ಠ ಮಟ್ಟ | 124.80 ಅಡಿ |
| ಇಂದಿನ ಮಟ್ಟ | 96 ಅಡಿ |
| ಒಳಹರಿವು | 103 ಕ್ಯುಸೆಕ್ |
| ಹೊರಹರಿವು | 3821 ಕ್ಯುಸೆಕ್ |
| ನೀರಿನ ಸಂಗ್ರಹ | 19.834 ಟಿಎಂಸಿ |

# ಆರ್.ಬಿ.ಟೆಕ್ ಕಂಪನಿಗೆ 18 ಕೋಟಿ ರು. ಪಾವತಿ: ಮೈಷುಗರ್ ಅಧ್ಯಕ್ಷ ಗಂಗಾಧರ್

## ಕಂಪನಿಯಿಂದಾದ 33 ಕೋಟಿ ರು. ನಷ್ಟದ ಮಾಹಿತಿ ಸರ್ಕಾರಕ್ಕೆ ರವಾನೆ | ಕರಾರಿನಂತೆ ನಷ್ಟದ ಬಾಬ್ತು ಸರಿದೂಗಿಸುವುದಕ್ಕೆ ಬದ್ಧ | ಅಧ್ಯಕ್ಷರಿಂದ ಸುದ್ದಿಗೋಷ್ಠಿ

• **ಕನ್ನಡಪ್ರಭ ವಾರ್ತೆ** ಮಂಡ್ಯ

ಕಳೆದ ಸಾಲಿನಲ್ಲಿ ಮೈಷುಗರ್ ಕಾರ್ಖಾನೆಯಲ್ಲಿ ಕಬ್ಬು ನುರಿಸಿರುವ ಆರ್.ಬಿ.ಟೆಕ್ ಕಂಪನಿಯವರಿಗೆ 18 ಕೋಟಿ ರು.ಗಳನ್ನು ಮಾತ್ರ ಪಾವತಿಸಿರುವುದಾಗಿ ಕಾರ್ಖಾನೆ ಅಧ್ಯಕ್ಷ ಸಿ.ಡಿ.ಗಂಗಾಧರ್ ಸ್ಪಷ್ಟಪಡಿಸಿದರು.

ಕರಾರು ಒಪ್ಪಂದದಂತೆ ಪ್ರತಿ ಟನ್‌ಗೆ 900 ರು.ನಂತೆ 2.50 ಲಕ್ಷ ಮೆಟ್ರಿಕ್ ಟನ್‌ಗೆ 22.50 ಕೋಟಿ ರು. ಪಾವತಿಸಬೇಕಿತ್ತು. ಕಂಪನಿ 2 ಲಕ್ಷ ಟನ್ ಕಬ್ಬು ಅರೆದಿರುವುದರಿಂದ 18 ಕೋಟಿ ರು. ಪಾವತಿಸಿ 4.50 ಕೋಟಿ ರು. ಪಾವತಿ ಮಾಡಿಲ್ಲ ಎಂದು ಸೋಮವಾರ ಸುದ್ದಿಗೋಷ್ಠಿಯಲ್ಲಿ ಸ್ಪಷ್ಟಪಡಿಸಿದರು.

ಕಳೆದ ಹಂಗಾಮಿನಲ್ಲಿ ಆರ್.ಬಿ.ಟೆಕ್ ಕಂಪನಿಯಿಂದ ಮೈಷುಗರ್‌ಗೆ ಆದ 33 ಕೋಟಿ ರು. ನಷ್ಟದಬಗ್ಗೆಸರ್ಕಾರಕ್ಕೆಮಾಹಿತಿನೀಡಬೇಕಿರುವುದು

ಮಂಡ್ಯದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮೈಷುಗರ್ ಅಧ್ಯಕ್ಷ ಸಿ.ಡಿ.ಗಂಗಾಧರ್ ಮಾತನಾಡಿದರು.

ನನ್ನ ಜವಾಬ್ದಾರಿ. ಕಂಪನಿಯು ಹಣ ಬಿಡುಗಡೆ ಮಾಡಿರುವ ವಿಚಾರದಲ್ಲಿ ಅಧಿಕಾರಿಗಳು ಲೋಪವೆಸಗಿರುವ ಬಗ್ಗೆಯೂ ಸರ್ಕಾರದ ಗಮನ ಸೆಳೆದಿದ್ದೇನೆ ಎಂದು ಹೇಳಿದರು.

ಕಾರ್ಖಾನೆಗೆ ನಷ್ಟ ಉಂಟುಮಾಡಿರುವ ಆರ್.ಬಿ.ಟೆಕ್ ಕಂಪನಿಯಿಂದಲೇ ಕಾರ್ಯಾಚರಣೆ ಮುಂದುವರಿಸುವುದು ಅನಿವಾರ್ಯವಾಗಿದೆ. ಮೈಷುಗರ್ ನಿರ್ವಹಣೆ ಮತ್ತು ಕಾರ್ಯಾಚರಣೆಗೆ ಕರೆದ ಟೆಂಡರ್‌ನಲ್ಲಿ ಆರ್.ಬಿ.ಟೆಕ್ ಕಂಪನಿಯೊಂದೇ ಭಾಗವಹಿಸುತ್ತಿದೆ. ಬೇರೆ ಯಾರೂ ಕಂಪನಿ ಮುನ್ನಡೆಸುವುದಕ್ಕೆ ಬಾರದ ಹಿನ್ನೆಲೆಯಲ್ಲಿ ಅವರನ್ನೇ ಕರಾರಿನಂತೆ ಮುಂದುವರಿಸಲಾಗುತ್ತಿದೆ ಎಂದರು.

ಆರ್.ಬಿ.ಟೆಕ್ ಕಂಪನಿಯನ್ನು ಮುಂದುವರಿಸುವುದಕ್ಕೆ ಕಂಪನಿಯ ತಕರಾರು ಇದ್ದರೂ ಕಾನೂನು ವಿಭಾಗದವರು ಒಮ್ಮೆ ಈ ಹಂತದಲ್ಲಿ ಕಂಪನಿಯನ್ನು ತೆರವುಗೊಳಿಸಿದರೆ ಕಾನೂನಿನ ಮೊರೆ ಹೋಗಿ ಕಂಪನಿಯ 2025- 26ನೇ ಹಂಗಾಮಿಗೆ ತೊಂದರೆಯಾಗಬಹುದು ಎಂದಿದ್ದರಿಂದ ಆರ್.ಬಿ.ಟೆಕ್ ಕಂಪನಿಯಿಂದಲೇ ಜೂನ್ ಅಂತ್ಯಕ್ಕೆ ಆರಂಭ ಮಾಡುವುದಾಗಿ ಭರವಸೆ ನೀಡಿದರು.

2023- 24ನೇ ಸಾಲಿನಲ್ಲಿ ಆರ್.ಬಿ.ಟೆಕ್ ಕಂಪನಿಯಿಂದ ಮೈಷುಗರ್‌ಗೆ ಉಂಟಾಗಿರುವ ನಷ್ಟದ ಕುರಿತು ಹದಿನೈದು ದಿನಗಳೊಳಗೆ ಮಾಹಿತಿ ನೀಡಲಾಗುವುದು ಎಂದ ಅವರು, 2024- 25ನೇ ಸಾಲಿಗೆ ಬಿಬಿಎಂಪಿಗೆ ಕೊಡಬೇಕಿದ್ದ 6 ಕೋಟಿ ರು. ಆಸ್ತಿ ತೆರಿಗೆಯನ್ನು ಒಂದೇ ಕಂತಿನಲ್ಲಿ ಉಪಯೋಗ ಪಡೆದು 3.50 ಕೋಟಿ ರು. ನೀಡಿದ್ದೇವೆ. ಕೋ-ಜನ್ ಸಂಬಂಧ ಹೊಸ ರೋಟರಿ ಅಳವಡಿಸಲು 4 ಕೋಟಿ ರು., ಇಲಾಖೆಯ ಪ್ರಮಾಣದಲ್ಲಿ 4 ಮತ್ತು 5ನೇ ವೇತನ ಆಯೋಗದ ಶಿಫಾರಸ್ಸಿನಂತೆ ಕಾರ್ಮಿಕರಿಗೆ ಸುಮಾರು 4 ಕೋಟಿ ರು. ಹಾಗೂ ಪ್ರಸಕ್ತ ಹಂಗಾಮಿಗೆ ಈಗಾಗಲೇ 6.50 ಕೋಟಿ ರು.ಗಳನ್ನು ಕಾರ್ಮಿಕರಿಗೆ ಮತ್ತು ಉಪಕರಣಗಳಿಗೆ ನೀಡಿದೆ. ಇವೆಲ್ಲವನ್ನೂ ಸರ್ಕಾರದ ಹಣಕಾಸಿನ ನೆರವಿಲ್ಲದೆ ನೀಡಿರುವುದಾಗಿ ವಿವರಿಸಿದರು. ಪ್ರಸಕ್ತ ಹಂಗಾಮಿನಲ್ಲಿ ಕಾರ್ಖಾನೆಯನ್ನು ಸಮರ್ಥವಾಗಿ ಮುನ್ನಡೆಸುವುದರೊಂದಿಗೆ ಶೇ.8ರಷ್ಟು ಇಳುವರಿ ಬರುವಂತೆ ಕಾರ್ಯಾಚರಣೆ ನಡೆಸಲಾಗುವುದು. ಕಾರ್ಖಾನೆಗೆ ನಷ್ಟವಾಗದಂತೆ ಕ್ರಮ ಜರುಗಿಸಲು ಪೂರ್ವಭಾವಿಯಾಗಿ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಭರವಸೆ ನೀಡಿದರು. ರುದ್ರಪ್ಪ, ಸುಂಡಹಳ್ಳಿ ಮಂಜುನಾಥ್, ಅಪ್ಪಾಜಿಗೌಡ, ವಿಜಯ್ ಕುಮಾರ್, ಕೃಷ್ಣಪ್ಪ ಇತರರಿದ್ದರು.

# ರೈತರಿಗೆ ಸಮರ್ಪಕ ನೀರಾವರಿ ಯೋಜನೆ ಕಲ್ಪಿಸಲು ಕ್ರಮ

## ಶಾಸಕ ಕೆ.ಎಂ.ಉದಯ್ ಭರವಸೆ | ಬೆಳತೂರು ಕೆರೆಕೋಡಿ, ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ

• **ಕನ್ನಡಪ್ರಭ ವಾರ್ತೆ** ಮದ್ದೂರು

ಗ್ರಾಮಾಂತರ ಪ್ರದೇಶಗಳ ಸಮಗ್ರ ಅಭಿವೃದ್ಧಿ ಹಾಗೂ ರೈತರಿಗೆ ಸಮರ್ಪಕ ನೀರಾವರಿ ಯೋಜನೆಗಳನ್ನು ಕಲ್ಪಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ಶಾಸಕ ಕೆ.ಎಂ.ಉದಯ್ ಹೇಳಿದರು.

ತಾಲೂಕಿನ ಬೆಳತೂರು ಗ್ರಾಮದಲ್ಲಿ ಸೋಮವಾರ ಕಾವೇರಿ ನೀರಾವರಿ ನಿಗಮದ ವತಿಯಿಂದ ಕೆರಗೋಡು ಶಾಖಾ ನಾಲೆಯಡಿ ಬರುವ ಬೆಳತೂರು ಕೆರೆ ಕೋಡಿ ಮತ್ತು ರಸ್ತೆ ಅಭಿವೃದ್ಧಿಗೆ 5 ಕೋಟಿ ರು. ವೆಚ್ಚದ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ಹಳ್ಳಿಗಳಿಗೆ ಮೂಲ ಸೌಕರ್ಯ ಕಲ್ಪಿಸಲು ಮತ್ತು ನೀರಾವರಿ ಯೋಜನೆಗಳ ಸಮಗ್ರ ಅಭಿವೃದ್ಧಿಗೆ 180 ಕೋಟಿ ರು. ವೆಚ್ಚದ ಕಾಮಗಾರಿಗಳಿಗೆ ಶೀಘ್ರ ಚಾಲನೆ ನೀಡಲಾಗುವುದು ಎಂದು ಭರವಸೆ ವ್ಯಕ್ತಪಡಿಸಿದರು.

ಈ ಬಾರಿ ಉತ್ತಮ ಮಳೆಯಾಗಿದೆ. ಕೆಆರ್‌ಎಸ್ ಅಣೆಕಟ್ಟೆಯಲ್ಲಿ ನೀರು ಇರುವುದರಿಂದ ಯಾವುದೇ ಕೊರತೆಯಿಲ್ಲ. ಜತೆಗೆ ನಾಲೆಗಳು,

ರಸ್ತೆಗಳು, ಕೆರೆಗಳು ಸಮಗ್ರ ಅಭಿವೃದ್ಧಿ ಯಾಗುತ್ತಿರುವುದರಿಂದ ರೈತರಿಗೆ ಒಳ್ಳೆಯ ದಿನಗಳು ಶುರುವಾಗಿವೆ. ಸರ್ಕಾರ ರೈತಪರ ಇದ್ದು ಯಾವುದೇ ಆತಂಕ ಬೇಡ ಎಂದರು.

ಕೃಷಿ ಇಲಾಖೆ, ಹೈನುಗಾರಿಕೆಯಲ್ಲೂ ವಿವಿಧ ರೀತಿಯ ಸೌಲಭ್ಯ ಹಾಗೂ ಸಬ್ಸಿಡಿಗಳನ್ನು ನೀಡುವ ಮೂಲಕ ರೈತರಿಗೆ ಅನುಕೂಲ ಕಲ್ಪಿಸಲಾಗುತ್ತಿದೆ. ಇವುಗಳನ್ನು ಸದ್ಬಳಕೆ ಮಾಡಿಕೊಂಡು ಉತ್ತಮ ಜೀವನ ರೂಪಿಸಿ ಕೊಳ್ಳಬೇಕೆಂದು ಸಲಹೆ ನೀಡಿದರು.

ಡಿಸಿಸಿ ಬ್ಯಾಂಕ್ ನಿರ್ದೇಶಕ ಪಿ.ಸಂದರ್ಶ ಮಾತನಾಡಿ, ಬೆಳತೂರು ಗ್ರಾಮದ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಶಾಸಕ ಕೆ.ಎಂ.ಉದಯ್ ಅವರು 5 ಕೋಟಿ ರು.

ಮದ್ದೂರು ತಾಲೂಕಿನ ಬೆಳತೂರು ಗ್ರಾಮದಲ್ಲಿ ಕೆರೆ ಕೋಡಿ ಮತ್ತು ರಸ್ತೆ ಅಭಿವೃದ್ಧಿಗೆ ಶಾಸಕ ಕೆ.ಎಂ.ಉದಯ್ ಭೂಮಿ ಪೂಜೆ ನೆರವೇರಿಸಿದರು.ಈ ವೇಳೆ ಗ್ರಾಪಂ ಅಧ್ಯಕ್ಷೆ ಸುನೀತಾ, ಮಾಜಿ ಅಧ್ಯಕ್ಷ ಕೃಷ್ಣಪ್ಪ ಹಾಗೂ ಮುಖಂಡರಿದ್ದರು.

ವೆಚ್ಚದ ಕಾಮಗಾರಿಗೆ ಚಾಲನೆ ನೀಡುತ್ತಿರುವುದು ಪ್ರಶಂಸನೀಯ ಸಂಗತಿ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ವೇಳೆ ಗ್ರಾಪಂ ಅಧ್ಯಕ್ಷೆ ಸುನೀತಾ, ಮಾಜಿ ಅಧ್ಯಕ್ಷ ಕೃಷ್ಣಪ್ಪ, ಮುಖಂಡರಾದ ಅನಂತರಾಮು, ಪ್ರಸನ್ನಕುಮಾರ್, ಶಿವರಾಜ್ ಸೇರಿದಂತೆ ಇನ್ನಿತರರು ಹಾಜರಿದ್ದರು.

### ಯುದ್ಧದ ವಿಚಾರವಾಗಿ ಸಿಎಂ ಯಾವ ಅರ್ಥದಲ್ಲಿ ಹೇಳಿದ್ದಾರೋ ಗೊತ್ತಿಲ್ಲ: ಶಾಸಕ ಉದಯ್

ಮದ್ದೂರು: ದೇಶದ ಸ್ವಾಭಿಮಾನಕ್ಕೆ ಧಕ್ಕೆಯಾದರೆ ಸಹಿಲಾಗದು. ಆದರೆ, ಮುಖ್ಯಮಂತ್ರಿ ಸಿದ್ದರಾಮಯ್ಯ ರವರು ಯಾವ ಅರ್ಥದಲ್ಲಿ ಯುದ್ಧ ಅಗತ್ಯವಿಲ್ಲವೆಂದಿದ್ದಾರೋ ಗೊತ್ತಿಲ್ಲ ಎಂದು ಶಾಸಕ ಕೆ. ಎಂ ಉದಯ್ ತಿಳಿಸಿದರು. ಸುದ್ದಿಗಾರರು ಕೇಳಿದ ಪ್ರಶ್ನೆಗಳಿಗೆ ಉತ್ತರಿಸಿದ ಅವರು, ಮುಖ್ಯಮಂತ್ರಿಗಳು ಆರ್ಥಿಕ ತಜ್ಞರು. ಯುದ್ಧ ಸಂಭವಿಸಿದರೆ ಆರ್ಥಿಕ ಹೊರೆ ಸಾಧ್ಯತೆ ಬಗ್ಗೆ ಯೋಚಿಸಿ ಈ ರೀತಿಯ ಹೇಳಿಕೆ ನೀಡಿರಬಹುದೇನೋ ಗೊತ್ತಿಲ್ಲ. ಆದರೆ, ಯುದ್ಧ ಅನಿವಾರ್ಯವಾದರೆ ನಮ್ಮ ದೇಶ ಸುಮ್ಮನೆ ಕುಳಿತುಕೊಳ್ಳಬಾರದು ಎಂದರು. ನೂರಾರು ಕೋಟಿ ರು. ವೆಚ್ಚದ ಕೆಮ್ಮಣ್ಣು ನಾಲೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡುವಂತೆ ಡಿಸಿಎಂ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿ ಮಾಡಿ ಚರ್ಚಿಸಿ ದಿನಾಂಕ ನಿಗದಿ ಮಾಡಲಾಗುವುದು ಎಂದು ಹೇಳಿದರು.

# ಇಂದು ಪ್ರಸನ್ನ ಗಣಪತಿ ದೇಗುಲ ಪ್ರತಿಷ್ಠಾಪನೆ ಪೂಜಾ ಕಾರ್ಯಕ್ರಮ

## ಒಕ್ಕಲಿಗರ ಸಮುದಾಯದ ಭವನ ಉದ್ಘಾಟನೆ

• **ಕನ್ನಡಪ್ರಭ ವ ವಾರ್ತೆ** ಮಳವಳ್ಳಿ

ಪಟ್ಟಣದ ಶ್ರೀರಾಮ ಒಕ್ಕಲಿಗರ ಸೇವಾ ಸಂಘ ಕನಕಪುರ ರಸ್ತೆಯ ಕೆ.ಎಸ್.ನಾಗೇಗೌಡ ಬಡಾವಣೆಯಲ್ಲಿ ನೂತನವಾಗಿ ನಿರ್ಮಿಸಿರುವ ಪ್ರಸನ್ನ ಗಣಪತಿ ದೇವಸ್ಥಾನದ ಪ್ರತಿಷ್ಠಾಪನೆ ಹಾಗೂ ಶ್ರೀರಾಮ ಒಕ್ಕಲಿಗರ ಸಮುದಾಯದ ಭವನದ ಉದ್ಘಾಟನಾ ಕಾರ್ಯಕ್ರಮವು ಏ.29 ಮತ್ತು ಏ.30ರಂದು ನಡೆಯಲಿದೆ.

ಮಂಗಳವಾರ ಸಂಜೆ ಕೋಟೆ ಗಂಗಾಧರೇಶ್ವರ ದೇವಸ್ಥಾನದಿಂದ ದೇವರ ಮೂರ್ತಿಯನ್ನು ಮಂಟೇಸ್ವಾಮಿ ಬಸಪ್ಪನ ಪೂರ್ಣಕುಂಭ ಪೂಜೆಯೊಂದಿಗೆ ಮೆರವಣಿಗೆ ಮೂಲಕ ತರಲಾಗುವುದು. ನಂತರ ಉಮಾಮಹೇಶ್ವರ ಕಳಸ ಪೂಜೆ, ಗಣಪತಿ ಹೋಮ, ರಾಕ್ಷೋಘ್ನ ಹೋಮ ನಡೆಯಲಿದೆ.

ಬುಧವಾರ ಬೆಳಗ್ಗೆ ಬ್ರಾಹ್ಮೀ ಮುಹೂರ್ತದಲ್ಲಿ ಗಣಪತಿ ಶಿಲಾ ಪ್ರತಿಷ್ಠಾಪನೆ, ನೇತ್ರೋನ್ಮಿಲನ, ಹೋಮ ಹವನಾದಿ, ಮಹಾಬಲಿಹವನ, ಪೂರ್ಣಾಹುತಿಯೊಂದಿಗೆ ಮಹಾ ಮಂಗಳಾರತಿ ನಂತರ ಪ್ರಸಾದ ವಿನಿಯೋಗ ನಡೆಯಲಿದೆ. ಎಲ್ಲ ಧಾರ್ಮಿಕ ಕಾರ್ಯಕ್ರಮಗಳು ಅಂಚೆದೊಡ್ಡಿಯ ನಾಗಭೂಷಣಾರಾಧ್ಯ ಅವರ ನೇತೃತ್ವದಲ್ಲಿ ಜರುಗಲಿವೆ. ಮಂಗಳವಾರ ಸಂಜೆ 7 ಗಂಟೆಗೆ ಆದಿ ಚುಂಚನಗಿರಿ ಮಹಾ ಸಂಸ್ಥಾನ ಮಠದ ಪೀಠಾಧ್ಯಕ್ಷರಾದ ನಿರ್ಮಲಾನಂದನಾಥ ಸ್ವಾಮೀಜಿ ಆಶೀರ್ವಚನ ನೀಡಲಿದ್ದಾರೆ. ಏ.30ರಂದು ಬೆಳಗ್ಗೆ 11ಗಂಟೆಗೆ ದೇವಸ್ಥಾನವನ್ನು ಮೈಸೂರು ಸಂಸದಯದುವೀರ್‌ಕೃಷ್ಣದತ್ತಚಾಮರಾಜ ಒಡೆಯರ್‌ಹಾಗೂ ಮಳವಳ್ಳಿ ಮಂಟೇಸ್ವಾಮಿ ಮಠದ ಪೀಠಾಧಿಪತಿ ವರ್ಚಸ್ವಿ ಶ್ರೀಕಂಠ ಸಿದ್ದಲಿಂಗ ರಾಜೇ ಅರಸ್ ಉದ್ಘಾಟಿಸುವವರು.

ಸಮುದಾಯ ಭವನವನ್ನು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ಆಡುಗೆ ಮನೆಯನ್ನು ಶಾಸಕ ಪಿ.ಎಂ.ನರೇಂದ್ರ ಸ್ವಾಮಿ ಹಾಗೂ ಊಟದ ಹಾಲ್ ಅನ್ನು ವಿಧಾನ ಪರಿಷತ್ ಮಾಜಿ ಉಪ ಸಭಾಪತಿ ಮರಿತಿಬ್ಬೇಗೌಡ ಅವರು ಲೋಕಾರ್ಪಣೆ ಮಾಡಲಿದ್ದಾರೆ.

ವೇದಿಕೆ ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಉದ್ಘಾಟಿಸುವರು. ದಾನಿಗಳೊಂದಿಗೆ ಮೈಸೂರಿನ ಪ್ರಾಚೀನ ಇತಿಹಾಸ ಪುರಾತತ್ವ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಮುಖ್ಯಸ್ಥ ಪ್ರವೀಣ ಶಲ್ವಪಿಳ್ಳೈ ಅಯ್ಯಂಗಾರ್‌ಅವರನ್ನು ಶಾಸಕ ಡಾ. ಅಶ್ವತ್ಥ್ ನಾರಾಯಣ ಅಭಿನಂದಿಸಲಿದ್ದಾರೆ. ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯರಾದ ಮಧು ಜಿ.ಮಾದೇಗೌಡ, ದಿನೇಶ್ ಗೂಳೀಗೌಡ, ಕೆ.ವಿವೇಕಾನಂದ ಭಾಗಿಯಾಗಲಿದ್ದಾರೆ. ಪುರಸಭೆ ಮಾಜಿ ಅಧ್ಯಕ್ಷ ನಾಡ ಯಜಮಾನ್ ಎಂ.ಸಿ.ವೀರೇಗೌಡ ಅಧ್ಯಕ್ಷತೆಯಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು, ಮಾಜಿ ಶಾಸಕ ಕೆ.ಅನ್ನದಾನಿ, ಎಂ.ಕೆ.ನಾಗಮಣಿ ನಾಗೇಗೌಡ, ಪುರಸಭೆ ಅಧ್ಯಕ್ಷ ಪುಟ್ಟಸ್ವಾಮಿ, ಉಪಾಧ್ಯಕ್ಷ ಎನ್. ಬಸವರಾಜು ಸೇರಿದಂತೆ ಹಲವು ಮುಖಂಡರು ಭಾಗವಹಿಸಲಿದ್ದಾರೆ ಎಂದು ಸಂಘದ ಪದಾಧಿಕಾರಿಗಳು ತಿಳಿಸಿದ್ದಾರೆ.

# ಶ್ರೀ ಪಟ್ಟಲದಮ್ಮ ದೇವಿ ದೇಗುಲಕ್ಕೆ ಹಾಕಿದ್ದ ಬೀಗ ತೆರವು

## ಹಬ್ಬದ ಮಾರ್ನಹಳ್ಳಿ, ಕರಡಿಕೊಪ್ಪಲು, ಚೋಕನಹಳ್ಳಿ, ಹಂಪಾಪುರ ಗ್ರಾಮಸ್ಥರಲ್ಲಿನ ಭಿನ್ನಮತ ಅಂತ್ಯ ಉಪವಿಭಾಗಾಧಿಕಾರಿ ಎಂ.ಶಿವಮೂರ್ತಿ ನೇತೃತ್ವದಲ್ಲಿ ನಡೆದ ಗ್ರ